# ಕರ್ನಾಟಕ ಪರೀಕ್ಷಾ ಪ್ರಾಧಿಕಾರ
## Karnataka Examinations Authority


ಸಂಖ್ಯೆ: ಇಡಿ/ಕೆಇಎ/ಆಡಳಿತ/ಸಿ.ಆರ್.03/2023-24 ದಿನಾಂಕ: 09.08.2024

**ಪ್ರಕಟಣೆ**

**BMTC(ಕಲ್ಯಾಣ ಕರ್ನಾಟಕ), KUWSDB & KKRTC ಸಂಸ್ಥೆಗಳಲ್ಲಿ ಖಾಲಿ ಇರುವ ಹುದ್ದೆಗಳಿಗೆ ನಡೆಸಲಾದ ಸ್ಪರ್ಧಾತ್ಮಕ ಪರೀಕ್ಷೆಯಲಿ ಅಭ್ಯರ್ಥಿಗಳು ಗಳಿಸಿರುವ ಅಂತಿಮ ಅಂಕ ಪಟ್ಟಿಯನ್ನು ಪ್ರಕಟಿಸುವ ಬಗ್ಗೆ.**

ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ದಿನಾಂಕ 13.07.2024 ಮತ್ತು 14.07.2024 ರಂದು BMTC (ನಿರ್ವಾಹಕರು-ಕಲ್ಯಾಣ ಕರ್ನಾಟಕ), KUWSDB (ಪ್ರಥಮ ದರ್ಜೆ ಲೆಕ್ಕ ಸಹಾಯಕರು) & KKRTC ಸಂಸ್ಥೆಗಳಲ್ಲಿನ ಖಾಲಿ ಇರುವ ವಿವಿಧ ಹುದ್ದೆಗಳಿಗೆ ಸ್ಪರ್ಧಾತ್ಮಕ ಪರೀಕ್ಷೆಯನ್ನು ನಡೆಸಲಾಗಿರುತ್ತದೆ ಹಾಗೂ ಸ್ಪರ್ಧಾತ್ಮಕ ಪರೀಕ್ಷೆಗೆ ಸಂಬಂಧಿಸಿದಂತೆ ದಿನಾಂಕ 16.07.2024 ರಂದು ತಾತ್ಕಾಲಿಕ ಕೀ ಉತ್ತರಗಳನ್ನು ಪ್ರಕಟಿಸಿ, ದಿನಾಂಕ 18.07.2024 ರವರೆಗೆ ಆಕ್ಷೇಪಣೆಗಳನ್ನು ಸಲ್ಲಿಸಲು ಅವಕಾಶ ನೀಡಲಾಗಿದ್ದು, ಸ್ವೀಕೃತವಾದ ಆಕ್ಷೇಪಣೆಗಳನ್ನು ವಿಷಯ ತಜ್ಞರ ಸಮಿತಿಯ ಮೂಲಕ ಪರಿಶೀಲಿಸಿ, ವಿಷಯ ತಜ್ಞರ ಸಮಿತಿಯ ಶಿಫಾರಸ್ಸಿನಂತೆ ಪರಿಷ್ಕೃತ ಕೀ ಉತ್ತರಗಳನ್ನು ದಿನಾಂಕ 24.07.2024 ರಂದು ಪ್ರಕಟಿಸಲಾಗಿರುತ್ತದೆ.

ಅದರಂತೆ ಅಭ್ಯರ್ಥಿಗಳು ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ಗಳಿಸಿದ ತಾತ್ಕಾಲಿಕ ಅಂಕ ಪಟ್ಟಿಯನ್ನು ಪ್ರಾಧಿಕಾರದ ವೆಬ್‌ಸೈಟ್‌ನಲ್ಲಿ ಪ್ರಕಟಿಸಿ ಆಕ್ಷೇಪಣೆಗಳಿದ್ದಲ್ಲಿ ದಿನಾಂಕ 03.08.2024 ಸಂಜೆ 5.30 ರೊಳಗೆ ನಿಗದಿತ ಲಿಂಕ್ ಮೂಲಕ ಪೂರಕ ದಾಖಲೆಗಳೊಂದಿಗೆ ಸಲ್ಲಿಸಲು ತಿಳಿಸಲಾಗಿತ್ತು. ತಾತ್ಕಾಲಿಕ ಅಂಕ ಪಟ್ಟಿಗೆ ಸ್ವೀಕೃತವಾದ ಎಲ್ಲಾ ಆಕ್ಷೇಪಣೆಗಳನ್ನು ಪರಿಶೀಲಿಸಿ ಅಂತಿಮ ಅಂಕ ಪಟ್ಟಿಯನ್ನು ಸಿದ್ಧಪಡಿಸಿ ಅಭ್ಯರ್ಥಿಗಳ ಮಾಹಿತಿಗಾಗಿ ಪ್ರಾಧಿಕಾರದ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗಿದೆ ಮತ್ತು ಸದರಿ ಅಂತಿಮ ಅಂಕ ಪಟ್ಟಿಯನ್ನು ಸಂಬಂಧಪಟ್ಟ ಸಂಸ್ಥೆಗೆ ಹಸ್ತಾಂತರಿಸಲಾಗುವುದು. ಸಂಬಂಧಪಟ್ಟ ಸಂಸ್ಥೆಯಿಂದ ನಿಯಮಾನುಸಾರ ಆಯ್ಕೆ ಪಟ್ಟಿ ಪ್ರಕಟಿಸಲು ಕ್ರಮವಹಿಸುವರು.

Visit to "KarnatakaHelp.in"

ಕಾರ್ಯನಿರ್ವಾಹಕ ನಿರ್ದೇಶಕರು


18ನೇ ಅಡ್ಡ ರಸ್ತೆ, ಸಂಪಿಗೆ ರಸ್ತೆ, ಮಲ್ಲೇಶ್ವರಂ, ಬೆಂಗಳೂರು – 560 012

18th Cross, Sampige Road, Malleshwaram, Bengaluru - 560 012.

Phone: 080 - 23 564 583 Helpline : 080 - 23 460 460.

e-mail : keauthority-ka@nic.in Website : http://kea.kar.nic.in